**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು-560 027**

ಸಂ:ಕರಾಸಾ/ಕೇಕ/ಸಂ/ವಾ/ಸಿ2/820 /2019-20 ದಿನಾಂಕ: 25/07/2019

**ಸುತ್ತೋಲೆ ಸಂಖ್ಯೆ : 1500 /2019**

ವಿಷಯ : ಅಂಧರ ಉಚಿತ ಬಸ್ ಪಾಸ್ ವಿತರಣೆ ಕುರಿತು.

ಉಲ್ಲೇಖ : 1. ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ 777/2017 ದಿನಾಂಕ 30.11.2016.

2. ಸಂ:ಸಾರಿಇ 116 ಸಾಸಂಇ 2019 ದಿನಾಂಕ 17.07.2019.

****

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಸರ್ಕಾರದ ಆದೇಶದಂತೆ, ಸಮಾಜದ ವಿಶೇಷ ವರ್ಗದ ಪ್ರಯಾಣಿಕರಿಗೆ ಉಚಿತ / ರಿಯಾಯಿತಿ ಬಸ್ ಪಾಸ್ ವಿತರಣೆ ಮಾಡುತ್ತಿದ್ದು, ಉಲ್ಲೇಖ-1 ರ ಸಾಮಾನ್ಯ ಸ್ಥಾಯಿ ಆದೇಶದಲ್ಲಿನ ನಿರ್ದೇಶನಗಳನ್ನು ಅನುಸರಿಸಿ ಅಂಧರಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡುತ್ತಿದೆ.

ಸದರಿ ಆದೇಶದಲ್ಲಿನ ಕ್ರಮ ಸಂಖ್ಯೆ IV. ಅಂಧರ ಉಚಿತ ಪಾಸು ವಿತರಣೆಯಲ್ಲಿ ಅನುಸರಿಸಬೇಕಾದ ಕ್ರಮಗಳು : ಅಂಶ ಸಂಖ್ಯೆ 08 ರಲ್ಲಿ " ಸರ್ಕಾರಿ / ಅರೆ ಸರ್ಕಾರಿ ಉದ್ಯೋಗದಲ್ಲಿರುವ ಅಂಧರು ಹಾಗೂ ಸಾರಿಗೆ ಭತ್ಯೆ ಪಡೆಯುತ್ತಿರುವ ಅಂಧರು ಉಚಿತ ಬಸ್ ಪಾಸ್ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ" ಎಂದು ತಿಳಿಸಲಾಗಿದೆ.

ಪ್ರಸ್ತುತ ಉಲ್ಲೇಖ-2 ರ ಸರ್ಕಾರದ ಪತ್ರದಲ್ಲಿ ಎಲ್ಲಾ ಅಂಧರಿಗೆ ಉಚಿತ ಬಸ್ ಪಾಸ್ ವಿತರಿಸಲು ನಿರ್ದೇಶಿಸಿರುವುದರಿಂದ, ಇನ್ನು ಮುಂದೆ ಎಲ್ಲಾ ಅಂಧರಿಗೆ ಉಲ್ಲೇಖ-1 ರ ನಿಯಮಾವಳಿಗಳನ್ನು ಅನುಸರಿಸಿ ಉಚಿತ ಬಸ್ ಪಾಸ್ ವಿತರಿಸಲು ಕ್ರಮ ಕೈಗೊಳ್ಳುವುದು.

ಈ ಆದೇಶವು ಕೂಡಲೇ ಜಾರಿಗೆ ಬರಲಿದೆ. ಇನ್ನುಳಿದಂತೆ, ಉಲ್ಲೇಖಿತ ಸಾಮಾನ್ಯ ಸ್ಥಾಯಿ ಆದೇಶದಲ್ಲಿನ ಇತರೆ ಅಂಶಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಸುತ್ತೋಲೆ ತಲುಪಿ ಜಾರಿಗೊಳಿಸಿದ್ದಕ್ಕೆ ತಪ್ಪದೇ ಸ್ವೀಕೃತಿಯನ್ನು ನೀಡುವುದು.

(ಶಿವಯೋಗಿ ಸಿ ಕಳಸದ, ಭಾ.ಆ.ಸೇ)
ವ್ಯವಸ್ಥಾಪಕ ನಿರ್ದೇಶಕರು.

ಪ್ರತಿಯನ್ನು:

1. ವ್ಯವಸ್ಥಾಪಕ ನಿರ್ದೇಶಕರು, ಬೆಂ.ಮ.ಸಾ.ಸಂಸ್ಥೆ / ವಾ.ಕ.ರ.ಸಾ. ಸಂಸ್ಥೆ / ಈ.ಕ.ರ.ಸಾ. ಸಂಸ್ಥೆ, ಕೇಂದ್ರ ಕಛೇರಿ, ಬೆಂಗಳೂರು/ಹುಬ್ಬಳ್ಳಿ/ಕಲ್ಬುರ್ಗಿರವರ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು / ವಿಭಾಗೀಯ ಸಂಚಾರ ಅಧಿಕಾರಿಗಳು / ಘಟಕ ವ್ಯವಸ್ಥಾಪಕರು, ಕ.ರಾ.ರ.ಸಾ. ನಿಗಮರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
3. ಮುಖ್ಯ ಸಂಚಾರ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆ, ಕೇಂದ್ರ ಕಛೇರಿ, ಬೆಂಗಳೂರು / ಹುಬ್ಬಳ್ಳಿ / ಕಲಬುರ್ಗಿರವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
4. ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರುರವರ ಮಾಹಿತಿಗಾಗಿ ಕಳುಹಿಸಲಾಗಿದೆ.
5. ಹಿರಿಯ / ಆಪ್ತ ಕಾರ್ಯದರ್ಶಿಗಳು, ಅಧ್ಯಕ್ಷರು / ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಭ & ಜಾ) / ನಿರ್ದೇಶಕರು (ಸಿ&ಪ) ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರುರವರ ಮಾಹಿತಿಗಾಗಿ ಕಳುಹಿಸಲಾಗಿದೆ.